ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH
ಪತ್ರಿಕಾ ತುಣುಕುಗಳು
PAPER CLIPPINGS
ಇಲಾಖೆ / ವಿಷಯ: DEPARTMENT / SUBJECT: Reorganisation of Maharashtra Govt
ಪತ್ರಿಕೆಯ ಹೆಸರು : NAME OF THE NEWS PAPER : Samyukta Karnataka DATE : 28.11.2019



# ಸಚಿವ ಸ್ಥಾನಕ್ಕೆ ಚೌಕಾಸಿ

## ಮಹಾರಾಷ್ಟ್ರ-ಇಂದು ಹೊಸ ಸರ್ಕಾರ

ಮುಂಬೈ: ಮಹಾರಾಷ್ಟ್ರದ ರಾಜಕೀಯ ಗೊಂದಲಗಳಿಗೆ ಅಂತಿಮ ತೆರೆ ಬಿದ್ದಿದೆ. ಗುರುವಾರ ಶಿವಸೇನೆ ಮುಖ್ಯಸ್ಥ ಉದ್ಧವ್‌ಠಾಕ್ರೆ ನೂತನ ಮುಖ್ಯಮಂತ್ರಿಯಾಗಿ ಪ್ರತಿಜ್ಞಾವಿಧಿ ಸ್ವೀಕರಿಸುವ ಮೂಲಕ ರಾಜ್ಯದಲ್ಲಿ ಹೊಸ ಸರ್ಕಾರಕ್ಕೆ ಚಾಲನೆ ಸಿಗಲಿದೆ. ಏತನ್ಮಧ್ಯೆ ಪ್ರಭಾವಿ ಖಾತೆಗಳನ್ನು ಪಡೆಯಲು ಮಹಾಮೈತ್ರಿಯ ಮೂರೂ ಪಕ್ಷಗಳು ಭಾರೀ ಪೈಪೋಟಿಗಿಳಿದಿವೆ. ಇದೇ ಮೊದಲ ಬಾರಿಗೆ ಮುಂಬೈನ ಶಿವಾಜಿಪಾರ್ಕ್‌ನಲ್ಲಿ ಸರ್ಕಾರದ ಪ್ರಮಾಣವಚನ ಸಮಾರಂಭ ಆಯೋಜಿಸಲ್ಪಟ್ಟದ್ದು ಮಹಾನಗರದ ಹೃದಯಭಾಗದ ಈ ಪ್ರದೇಶದಲ್ಲಿ ಹೈಕೋರ್ಟ್ ಸೂಚನೆಯಂತೆ ವ್ಯಾಪಕ ಭದ್ರತೆ ಒದಗಿಸಲಾಗುತ್ತಿದೆ. ಸಂಜೆ 6:40ಕ್ಕೆ ಉದ್ಧವ್‌ಠಾಕ್ರೆ ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸಲಿದ್ದು ಉಪಮುಖ್ಯಮಂತ್ರಿಗಳಾಗಿ ಎನ್‌ಸಿಪಿಯ ಜಯಂತ್ ಪಾಟೀಲ್ ಹಾಗೂ ಕಾಂಗ್ರೆಸ್‌ನ ಬಾಳಾಸಾಹೇಬ್ ಥೋರಟ್ ಕೂಡಾ ಪ್ರತಿಜ್ಞಾವಿಧಿ ಸ್ವೀಕರಿಸುವರು.

ಶಿವಸೇನೆ, ಎನ್‌ಸಿಪಿ ಮತ್ತು ಕಾಂಗ್ರೆಸ್ ಪಕ್ಷಗಳ ಮುಖಂಡರು ಸರಣಿ ಸಭೆ ನಡೆಸಿದ್ದು ಹೊಸ ಸರ್ಕಾರದಲ್ಲಿ ಪ್ರಮುಖ ಖಾತೆಗಳು ತಮ್ಮ ಪಕ್ಷಕ್ಕೆ ಸಿಗಬೇಕೆಂದು ಪಟ್ಟು ಹಿಡಿದಿದ್ದಾರೆ. ಹಣಕಾಸು, ಗೃಹ ಮತ್ತು ಕಂದಾಯ ಖಾತೆಗಳಿಗೆ ಭಾರೀ ಚೌಕಾಸಿ ನಡೆದಿದೆ. ಸ್ಪೀಕರ್ ಸ್ಥಾನ ತನಗೆ ಬೇಕೆಂದು ಕಾಂಗ್ರೆಸ್ ಒತ್ತಡ ಹಾಕಿರುವುದು ಸಮಸ್ಯೆ ಬಿಗಡಾಯಿಸುವಂತೆ ಮಾಡಿದೆ. ಸದ್ಯದ ಮಾಹಿತಿಯಂತೆ 15:15:13ರ ಅನುಪಾತದಂತೆ ತ್ರಿಪಕ್ಷಗಳು ಸಚಿವಸ್ಥಾನ ಹೊಂದುವ ನಿರೀಕ್ಷೆಯಿದೆ.

ಬೆಳಿಗ್ಗೆ 8 ಗಂಟೆಗೆ ಆರಂಭಗೊಂಡ ವಿಶೇಷ ಅಧಿವೇಶನದಲ್ಲಿ ಹಂಗಾಮಿ ಸ್ಪೀಕರ್ ಕಾಳಿದಾಸ ಕೊಲಂಬ್‌ಕರ್ ಅವರು ಎಲ್ಲ 285 ಶಾಸಕರಿಗೆ ಪ್ರಮಾಣವಚನ ಬೋಧಿಸಿದರು. ಅತ್ತ ಬಿಜೆಪಿ ಜತೆ ಕೈಜೋಡಿಸಿ ಸರ್ಕಾರ ರಚಿಸಿ ಬಳಿಕ ರಾಜೀನಾಮೆ ನೀಡಿದ್ದ ಅಜಿತ್‌ಪವಾರ್ ಮತ್ತೆ ಎನ್‌ಸಿಪಿ ತೆಕ್ಕೆಗೆ ಸೇರಿದ್ದಾರೆ. ಇದರ ಬೆನ್ನಲ್ಲೇ ಶಾಸಕಾಂಗಪಕ್ಷ ನಾಯಕರಾಗಲಿದ್ದಾರೆ. 3 ದಿನಗಳ ಹಿಂದೆಯಷ್ಟೆ ಈ ಸ್ಥಾನ ತುಂಬಿದ್ದ ಜಯಂತ್‌ಪಾಟೀಲ್ ಡಿಸಿಎಂ ಹುದ್ದೆ ಗಿಟ್ಟಿಸಿದ್ದಾರೆ.



ನೀರಾವರಿ ಇಲಾಖೆ ಭ್ರಷ್ಟಾಚಾರಗಳ ರೂವಾರಿ ಅಜಿತ್‌ಪವಾರ್ ಅವರ ಬೆಂಬಲ ಪಡೆದು ಬಿಜೆಪಿ ಸರ್ಕಾರ ರಚನೆಗೆ ಮುಂದಾಗಬಾರದಿತ್ತು. ಇದು ಅತಿದೊಡ್ಡ ಪ್ರಮಾದ ಎಂದು ಬಿಜೆಪಿ ಮುಖಂಡ ಮಾಜಿ ಸಚಿವ ಏಕನಾಥ್ ಖಡ್ಸೆ ಆಕ್ಷೇಪಿಸಿದ್ದಾರೆ. ಅತ್ತ ಎನ್‌ಸಿಪಿ-ಕಾಂಗ್ರೆಸ್ ಜತೆ ಸೇರಿ ದಿ.ಬಾಳಾಠಾಕ್ರೆ ಅವರ ಹಿಂದುತ್ವ ಸಿದ್ಧಾಂತ ವಿರೋಧಿಯಾಗಿ ಶಿವಸೇನೆ ಸರ್ಕಾರ ರಚಿಸಿದೆ ಎಂದು ಆರೋಪಿಸಿ ಹಿರಿಯ ಮುಖಂಡ ರಮೇಶ್ ಸೋಲಂಕಿ ಪಕ್ಷಕ್ಕೆ ರಾಜೀನಾಮೆ ಸಲ್ಲಿಸಿದ್ದಾರೆ.

ಗುರುವಾರ ನಡೆಯಲಿರುವ ಪ್ರಮಾಣವಚನ ಸಮಾರಂಭಕ್ಕೆ ಶಿವಸೇನೆ ಪ್ರಧಾನಿ ಮೋದಿ ಅವರಿಗೆ ಆಹ್ವಾನ ನೀಡಿದೆ. ಇದೇ ಮೊದಲ ಬಾರಿಗೆ 350 ರೈತರನ್ನು ಆಹ್ವಾನಿಸಲಾಗಿದೆ. ಅಲ್ಲದೆ ಕಾಂಗ್ರೆಸ್ ಅಧ್ಯಕ್ಷೆ ಸೋನಿಯಾಗಾಂಧಿ, ರಾಹುಲ್‌ಗಾಂಧಿ, ಕಾಂಗ್ರೆಸ್ ಆಡಳಿತದಲ್ಲಿರುವ ಎಲ್ಲ ಸಿಎಂಗಳು, ಡಿಎಂಕೆ ಮುಖ್ಯಸ್ಥ ಎಂ.ಕೆ.ಸ್ಟಾಲಿನ್, ಪಶ್ಚಿಮಬಂಗಾಳ ಸಿಎಂ ಮಮತಾ ಬ್ಯಾನರ್ಜಿ, ದೆಹಲಿ ಸಿಎಂ ಕೇಜ್ರಿವಾಲ್ ಸೇರಿದಂತೆ ಹಲವು ಗಣ್ಯರನ್ನು ಆಹ್ವಾನಿಸಲಾಗಿದೆ. ಆದರೆ ಸೋನಿಯಾ, ರಾಹುಲ್ ಗೈರಾಗಲಿದ್ದಾರೆ ಎನ್ನಲಾಗಿದೆ.

### ಗವರ್ನರ್ ತಲೆದಂಡ ಸಾಧ್ಯತೆ

ಮಹಾರಾಷ್ಟ್ರದಲ್ಲಿ ಉಂಟಾದ ರಾಜಕೀಯ ಬೆಳವಣಿಗೆಗಳ ಬೆನ್ನಲ್ಲೇ ರಾಜ್ಯಪಾಲರ ಬದಲಾವಣೆಗೆ ಕೇಂದ್ರ ಸರ್ಕಾರ ಮುಂದಾಗಿದೆ ಎನ್ನಲಾಗಿದೆ. ಮುಂಜಾನೆ ರಾಷ್ಟ್ರಪತಿ ಆಡಳಿತ ತೆರವುಗೊಳಿಸಿ ಬಿಜೆಪಿ-ಎನ್‌ಸಿಪಿ ಸರ್ಕಾರ ರಚನೆಗೆ ತರಾತುರಿಯಲ್ಲಿ ಅವಕಾಶ ನೀಡಿ ಪ್ರಮಾಣವಚನ ಕೂಡ ಬೋಧಿಸುವ ಮೂಲಕ ವಿವಾದ ಸೃಷ್ಟಿಸಿದ ರಾಜ್ಯಪಾಲ ಭಗತ್ ಸಿಂಗ್ ಕೊಶ್ಯಾರಿ ಅವರನ್ನು ಬದಲಿಸುವ ಮೂಲಕ ಉಂಟಾಗಿರುವ ಆಕ್ರೋಶವನ್ನು ತಣ್ಣಗಾಗಿಸಲು ಕೇಂದ್ರ ಸರ್ಕಾರ ಮುಂದಾಗಿದೆ. ಕೊಶ್ಯಾರಿ ಅವರನ್ನು ವರ್ಗಾವಣೆ ಮಾಡಿ ಅವರ ಜಾಗಕ್ಕೆ ರಾಜಸ್ಥಾನದ ರಾಜ್ಯಪಾಲ ಕಲ್‌ರಾಜ್ ಮಿಶ್ರಾ ಅವರನ್ನು ನೇಮಿಸಲು ಸರ್ಕಾರ ಚಿಂತನೆ ನಡೆಸಿದೆ ಎಂದು ಉನ್ನತ ಮೂಲಗಳು ತಿಳಿಸಿವೆ.

- ಮಹಾರಾಷ್ಟ್ರ ವಿಕಾಸ ಆಘಡಿ ಸರ್ಕಾರ
- ಉದ್ಧವ್‌ಠಾಕ್ರೆ ಸಿಎಂ ಇಂದು ಪ್ರಮಾಣ
- ಸಮಾರಂಭಕ್ಕೆ ೩೫೦ ರೈತರಿಗೆ ಆಹ್ವಾನ
- ಡಿಸಿಎಂಗಳಾಗಿ ಜಯಂತ್-ಥೋರೋಟ್
- ಪ್ರಭಾವಿ ಮಂತ್ರಿಗಿರಿಗೆ ಜಟಾಪಟಿ ಶುರು
- ಶಾಸಕರುಗಳಿಂದ ಪ್ರತಿಜ್ಞಾವಿಧಿ ಸ್ವೀಕಾರ
- ಅಜಿತ್‌ಪವಾರ್‌ಗೆ ಮತ್ತೆ ಪ್ರಮುಖ ಹುದ್ದೆ